ಕರ್ನಾಟಕ ವಿಧಾನ ಸಭೆ, ಸಂಶೋಧನಾ ಮತ್ತು ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

ಇಲಾಖೆ / ವಿಷಯ: DEPARTMENT / SUBJECT: [illegible]

ಪತ್ರಿಕೆಯ ಹೆಸರು : NAME OF THE NEWS PAPER : ಕನ್ನಡಪ್ರಭ ದಿನಾಂಕ : DATE : 05/06/2019

# ಅಕ್ರಮ ಅಧಿಕಾರಿಗಳ ಸಕ್ರಮ: ಸ್ಪೀಕರ್ ಆಕ್ಷೇಪ?

## ಅಕ್ರಮವಾಗಿ ನೇಮಕಗೊಂಡ ಕೆಎಎಸ್ ಅಧಿಕಾರಿಗಳಿಗೆ ಸುಗ್ರೀವಾಜ್ಞೆ ಮೂಲಕ ಸೇವಾಭದ್ರತೆ

## ಶಾಸಕರಿಂದ ವಿರೋಧ ಬಂದಿದೆ, ಜಾಗ್ರತೆಯಿಂದ ಕ್ರಮ ಕೈಗೊಳ್ಳಿ: ಸಿಎಂಗೆ ರಮೇಶ್ ಪತ್ರ

• **ಕನ್ನಡಪ್ರಭ ವಾರ್ತೆ** ಬೆಂಗಳೂರು

5/6/19

ಕಳೆದ 1998, 1999 ಮತ್ತು 2004ರ ಅವಧಿಯಲ್ಲಿ ಅಕ್ರಮವಾಗಿ ನೇಮಕಗೊಂಡ ಆರೋಪ ಎದುರಿಸುತ್ತಿರುವ ಕೆಎಎಸ್ ಅಧಿಕಾರಿಗಳ ಸೇವಾ ಭದ್ರತೆ ಕಾಪಾಡಲು



ಸುಗ್ರೀವಾಜ್ಞೆ ಹೊರಡಿಸುವ ಸರ್ಕಾರ ನಿರ್ಧಾರಕ್ಕೆ ವಿಧಾನ ಸಭೆ ಸಭಾಧ್ಯಕ್ಷ ಕೆ.ಆರ್. ರಮೇಶ್ ಕುಮಾರ್ ಪರೋಕ್ಷವಾಗಿ ವಿರೋಧ ವ್ಯಕ್ತಪಡಿಸಿದ್ದಾರೆ.

ಈ ಬಗ್ಗೆ ಮುಖ್ಯಮಂತ್ರಿ ಎಚ್.ಡಿ. ಕುಮಾರಸ್ವಾಮಿ ಅವರಿಗೆ ಪತ್ರ ಬರೆದಿರುವ ಅವರು, ಯಾವುದೇ ಒಂದು ಸದುದ್ದೇಶದಿಂದ ಮಾಡುವ ಕೆಲಸದಿಂದ ನಮ್ಮ ಅರಿವಿಲ್ಲದೆ ನಿರಪರಾಧಿಗಳಾದ ಇತರರಿಗೆ ವಿನಾಕಾರಣ ಅನ್ಯಾಯ ಆಗದಂತೆ ಜಾಗ್ರತೆ ವಹಿಸಬೇಕು ಎಂದು ಪರೋಕ್ಷ ಎಚ್ಚರಿಕೆ ನೀಡಿದ್ದಾರೆ.

**ರಮೇಶ್ ಬರೆದ ಪತ್ರದ ವಿವರ:** ಕಳೆದ ಮೇ 27ರಂದು ನಡೆದ ರಾಜ್ಯ ಸಚಿವ ಸಂಪುಟ ಸಭೆಯಲ್ಲಿ 'ಕರ್ನಾಟಕ ಸಿವಿಲ್ ಸೇವೆಗಳ (ಆಯ್ಕೆ ಪ್ರಾಧಿಕಾರದ ಮೂಲಕ ಪ್ರಕಟಿಸಲಾದ ಅಂತಿಮ ಆಯ್ಕೆ ಪಟ್ಟಿಯ ಅನುಸರಣೆಯಲ್ಲಿ ನೇಮಕವಾದ ವ್ಯಕ್ತಿಗಳ ರಕ್ಷಣೆ) ಅಧ್ಯಾದೇಶ-2019 ವಿಧೇಯಕವನ್ನು ಸುಗ್ರೀವಾಜ್ಞೆ ಮೂಲಕ ಜಾರಿಗೊಳಿಸಲು ಕೈಗೊಂಡಿರುವ ನಿರ್ಣಯಕ್ಕೆ, ಸಂಬಂಧಿಸಿದಂತೆ ರಾಜ್ಯದ ಹಲವು ಶಾಸಕರು ತಮ್ಮ ಅನಿಸಿಕೆ ವ್ಯಕ್ತಪಡಿಸಿದ್ದಾರೆ. ಎಲ್ಲ ಶಾಸಕರುಗಳ ಭಾವನೆಗಳು ಏಕರೀತಿಯದ್ದಾಗಿವೆ. ಯಾವುದೇ ಸರ್ಕಾರಿ ನೌಕರರಿಗೆ ಸೇವಾ ಭದ್ರತೆಯನ್ನು ಒದಗಿಸುವ ಸರ್ಕಾರದ ನಿರ್ಣಯಕ್ಕೆ ನಮ್ಮ ಯಾರ ಆಕ್ಷೇಪವೂ ಇರಕೂಡದು. ಆದರೆ ಸೇವಾ ಜ್ಯೇಷ್ಠತೆ ಪರಿಗಣಿಸುವಾಗ ಅತ್ಯಂತ ಜಾಗರೂಕತೆಯಿಂದ ಹೆಜ್ಜೆ ಇಡಬೇಕಾಗುತ್ತದೆ. ಈ ಹಿನ್ನೆಲೆಯಲ್ಲಿ ಶಾಸಕರ ಪತ್ರ ಅವಲೋಕಿಸಿ ಅಗತ್ಯ ಕ್ರಮ ಕೈಗೊಳ್ಳಬೇಕೆಂದು ಬಯಸುವುದಾಗಿ ರಮೇಶ್ ಕುಮಾರ್ ಪತ್ರದಲ್ಲಿ ತಿಳಿಸಿದ್ದಾರೆ.

**ತಪ್ಪು ಮಾಡದವರಿಗೆ ಶಿಕ್ಷೆ ಸರಿಯಲ್ಲ:** ಇದೇ ರೀತಿ ಅಭಿಪ್ರಾಯಪಟ್ಟಿರುವ ಬಾಗೇಪಲ್ಲಿ ಶಾಸಕ ಎಸ್.ಎನ್. ಸುಬ್ಬಾರೆಡ್ಡಿ ಅವರು ಸಿಎಂಗೆ ಪ್ರತ್ಯೇಕ ಪತ್ರ ಬರೆದಿದ್ದಾರೆ.

ಸರ್ಕಾರ ಹೊರಡಿಸುವ ಸುಗ್ರೀವಾಜ್ಞೆಯಿಂದ ಕೆಎಎಸ್ ವೃಂದದ ಅಧಿಕಾರಿಗಳ ಸೇವಾ ಹಿರಿತನಕ್ಕೆ ಧಕ್ಕೆ ಬರುವುದಲ್ಲದೆ, ಅವರಿಗೆ ನ್ಯಾಯಯುತವಾಗಿ ಲಭಿಸಬೇಕಾದ ಬಡ್ತಿ ವರ್ಷಾನುಗಟ್ಟಲೇ ಮುಂದೂಡಿಕೆಯಾಗುತ್ತದೆ. ಸರ್ಕಾರ ಹೊರಡಿಸಲು ಉದ್ದೇಶಿಸಿರುವ ಸುಗ್ರೀವಾಜ್ಞೆಯಿಂದ ಅಧಿಕಾರಿಗಳಿಗೆ ಸೇವಾ ಭದ್ರತೆಯನ್ನು ನೀಡುವುದು ನ್ಯಾಯ ಸಮ್ಮತವಾಗಿದೆ. ಆದರೆ ಕೆಲವೇ ಅಧಿಕಾರಿಗಳ ಹಿತವನ್ನು ಗಮನದಲ್ಲಿಟ್ಟುಕೊಂಡು ಯಾವ ತಪ್ಪೂ ಮಾಡದ ಇತರೆ ಅಧಿಕಾರಿಗಳನ್ನು ಶಿಕ್ಷಿಸುವುದು ಸರಿಯಾದ ಕ್ರಮವಲ್ಲ. ಇದರಿಂದ ಸಮಾಜಕ್ಕೆ ತಪ್ಪು ಸಂದೇಶ ನೀಡಿದಂತಾಗುತ್ತದೆ. ಜತೆಗೆ, ಯುವ ಪೀಳಿಗೆಗೆ ಸರ್ಕಾರ ಮತ್ತು ನ್ಯಾಯಾಲಯಗಳ ಮೇಲೆ ನಂಬಿಕೆ ಕಳೆದುಕೊಳ್ಳುವ ಪರಿಸ್ಥಿತಿ ಉಂಟಾಗುತ್ತದೆ ಎಂದು ಪತ್ರದಲ್ಲಿ ತಿಳಿಸಿದ್ದಾರೆ.

ಈ ಹಿನ್ನೆಲೆಯಲ್ಲಿ ಈ ವಿಷಯವನ್ನು ಮತ್ತೊಮ್ಮೆ ಸಚಿವ ಸಂಪುಟದಲ್ಲಿಟ್ಟು ಅದರ ಸಾಧಕ-ಬಾಧಕಗಳನ್ನು ಚರ್ಚಿಸಿ, ಬಾಧಿತ ಅಧಿಕಾರಿಗಳಿಗೆ ನ್ಯಾಯ ದೊರಕಿಸಿಕೊಡಬೇಕೆಂದು ಸುಬ್ಬಾರೆಡ್ಡಿ ಮನವಿ ಮಾಡಿದ್ದಾರೆ.

### ಇಕ್ಕಟ್ಟಿನಲ್ಲಿ ಸರ್ಕಾರ

**ಕೆಎಎಸ್ ಅಧಿಕಾರಿಗಳ ಸೇವಾ ಭದ್ರತೆ**



**ಕಾಪಾಡಲು ಸಚಿವ ಸಂಪುಟ ತೆಗೆದುಕೊಂಡ ನಿರ್ಣಯದ ಬಗ್ಗೆ ಶಾಸಕರು ತೀವ್ರ ವಿರೋಧ ವ್ಯಕ್ತಪಡಿಸುತ್ತಿರುವುದರಿಂದ ಮುಖ್ಯಮಂತ್ರಿ ಎಚ್.ಡಿ. ಕುಮಾರಸ್ವಾಮಿ ಇಕ್ಕಟ್ಟಿಗೆ ಸಿಲುಕಿದ್ದಾರೆ. ಸಭಾಧ್ಯಕ್ಷ ರಮೇಶಕುಮಾರ್ ಅವರು ಬರೆದ ಪತ್ರ ತಲುಪಿದ ಹಿನ್ನೆಲೆಯಲ್ಲಿ ಸೋಮವಾರ ಖುದ್ದಾಗಿ ಸಭಾಧ್ಯಕ್ಷರನ್ನು ಭೇಟಿ ಮಾಡಿದ ಮುಖ್ಯಮಂತ್ರಿ ಕುಮಾರಸ್ವಾಮಿ ಈ ವಿಷಯದ ಬಗ್ಗೆ ಚರ್ಚಿಸಿದರೆಂದು ಗೊತ್ತಾಗಿದೆ.**